SRI DEVARAJ URS ACADEMY OF HIGHER EDUCATION & RESEARCH
SRI DEVARAJ URS MEDICAL COLLEGE
Tamaka, Kolar

SDUAHER

UINIVERSITY LIBRARY & LEARNING RESOURCE CENTRE

Online Newspaper Clipping Service
**Dated, Friday 03rd March – 2017**

ಉದಯವಾಣಿ

**Pg.No.05**

# ಶತಶೃಂಗ ಸಂಚಿಕೆ ಬಿಡುಗಡೆ

## ■ ಸರಕಾರಿ ಪದವಿ ಕಾಲೇಜು ಅಭಿವೃದ್ಧಿಗೆ ಶ್ರಮಿಸಿ: ಪ್ರೊ. ರಘುವೀರ್



ಕೋಲಾರ ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದ ವಾರ್ಷಿಕ ಸಂಚಿಕೆ ಶತಶೃಂಗ ಪತ್ರಿಕೆಯನ್ನು ದೇವರಾಜ ಅರಸು ವೈದ್ಯಕೀಯಮಹಾವಿದ್ಯಾಲಯದ ಉಪ ಕುಲಪತಿ ಪ್ರೊ.ಸಿ.ವಿ.ರಘುವೀರ್ ಬಿಡುಗಡೆ ಮಾಡಿದರು.

ಕೋಲಾರ: ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಮೂರು ರ್‍ಯಾಂಕ್‌ಗಳನ್ನು ಬಾಚಿಕೊಂಡಿರುವ ಸರಕಾರಿ ಪ್ರಥಮ ದರ್ಜೆ ಕಾಲೇಜು ಮತ್ತಷ್ಟು ಉತ್ತುಂಗಕ್ಕೇರಿಸಲು ವಿದ್ಯಾರ್ಥಿಗಳು ಹಾಗೂ ಬೋಧಕವರ್ಗದವರು ಕೊಡುಗೆ ನೀಡಬೇಕೆಂದು ಶ್ರೀ ದೇವರಾಜ ಅರಸು ವೈದ್ಯಕೀಯ ಮಹಾವಿದ್ಯಾಲಯದ ಉಪ ಕುಲಪತಿ ಪ್ರೊ.ಸಿ.ವಿ.ರಘುವೀರ್ ಹೇಳಿದರು.

ಕಾಲೇಜಿನ ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ಬುಧವಾರ ವಾರ್ಷಿಕ ಸಂಚಿಕೆ 'ಶತಶೃಂಗ' ಬಿಡುಗಡೆ ಮಾಡಿ ಮಾತನಾಡಿದರು.

ಕಾಲೇಜಿನಲ್ಲಿರುವ ಎಲ್ಲಾ ವಿಭಾಗಗಳಿಗೂ ತನ್ನದೇ ಆದ ಪ್ರಾಮುಖ್ಯತೆ ಇದೆ, ಯಾವುದೂ ಕಡಿಮೆ ಅಲ್ಲ ಯಾವುದೇ ಹೆಚ್ಚಲ್ಲ, ಎಲ್ಲಾ ವಿಭಾಗಗಳು ಸಮಾಜಕ್ಕೆ ಉಪಯುಕ್ತಕಾರಿಯಾಗಿವೆ, ಆದ್ದರಿಂದ ವಿದ್ಯಾರ್ಥಿಗಳು ತಾವು ಆಯ್ಕೆ ಮಾಡಿಕೊಂಡ ವಿಭಾಗಗಳ ಬಗ್ಗೆ ಕೀಳರಿಮೆ ಬೆಳೆಸಿಕೊಳ್ಳದೆ ಭವಿಷ್ಯ ರೂಪಿಸಿಕೊಳ್ಳಬೇಕೆಂದರು.

ಖಾಸಗಿ ಕಾಲೇಜುಗಳಿಗೆ ಪೈಪೋಟಿ ನೀಡುವಂತೆ ಕೋಲಾರದ ಸರಕಾರಿ ಪ್ರಥಮ ದರ್ಜೆ ಕಾಲೇಜು ಹಲವಾರು ಸಾಧನೆಗಳನ್ನು ಮಾಡುತ್ತಿದೆ. ಸರಕಾರಿ ಕಾಲೇಜು ವಿದ್ಯಾರ್ಥಿಗಳು ಪ್ರೋತ್ಸಾಹಿಸುವ ನಿಲುವಾಗಿಯೇ ಜಾಲಪ್ಪ ನವರು ಕಾಲೇಜಿನ ಪ್ರತಿಭಾವಂತ ಹಾಗೂ ರ್‍ಯಾಂಕ್ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮಂಜೂರು ಮಾಡಿದ್ದಾರೆಂದರು.

ಅಧ್ಯಕ್ಷತೆವಹಿಸಿದ್ದ ಪ್ರೊ.ನರಸಿಂಹರೆಡ್ಡಿ ಮಾತನಾಡಿ, ದೇವರಾಜ ಅರಸು ವೈದ್ಯಕೀಯ ಕಾಲೇಜಿನ ಸಂಸ್ಥಾಪಕ ಆರ್.ಎಲ್.ಜಾಲಪ್ಪ ನವರು ತಮ್ಮ ಕಾಲೇಜಿನಲ್ಲಿದ್ದ ನೀರಿನ ಸಮಸ್ಯೆಯನ್ನು ಬಗೆಹರಿಸಲು ಕೊಳವೆ ಬಾವಿಯನ್ನು ಕೊರೆಸಿಕೊಟ್ಟಿದ್ದಾರೆ. ಸಮಾಜದ ಸಹಕಾರದಿಂದ ಕಾಲೇಜು ಮತ್ತಷ್ಟು ಮೈಲಿಗಲ್ಲುಗಳನ್ನು ಸ್ಥಾಪಿಸಲಿದೆಯೆಂದು ಪ್ರಕಟಿಸಿದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ಎಸ್.ಗಣೇಶ್ ಮಾತನಾಡಿ, ಮೂವತ್ತು ವರ್ಷಗಳ ನಂತರ ಸರಕಾರಿ ಪ್ರಥಮ ದರ್ಜೆ ಕಾಲೇಜು ವಾರ್ಷಿಕ ಸಂಚಿಕೆಯನ್ನು ಹೊರತರುತ್ತಿರುವುದು ಶ್ಲಾಘನೀಯ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕಾಲೇಜಿನ ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥ ಎಸ್.ಜಿ.ಲಕ್ಷ್ಮೀನಾರಾಯಣ್ ಮಾತನಾಡಿ, ಹಣಕಾಸಿನ ಕೊರತೆಯ ನಡುವೆಯೂ ಜಾಹೀರಾತುದಾರರನ್ನೇ ನಂಬಿಕೊಂಡು ವಾರ್ಷಿಕ ಸಂಚಿಕೆ ಶತಶೃಂಗವನ್ನು ಹೊರತರಲು ಕಾಲೇಜಿನ ವಿದ್ಯಾರ್ಥಿಗಳು ಮತ್ತು ಬೋಧಕ ಸಿಬ್ಬಂದಿ, ಪ್ರಾಂಶುಪಾಲರು ಸಹಕರಿಸಿದರೆಂದು ವಿವರಿಸಿದರು.

ಇದೇ ಸಂದರ್ಭದಲ್ಲಿ ಪ್ರತಿಭಾವಂತ ಹಾಗೂ ರ್‍ಯಾಂಕ್ ಪಡೆದ ವಿದ್ಯಾರ್ಥಿಗಳಿಗೆ ಜಾಲಪ್ಪ ನವರಿಂದ ತಲಾ ಹತ್ತು ಸಾವಿರ ರೂಪಾಯಿಗಳ ಪ್ರೋತ್ಸಾಹ ಧನವನ್ನು ವಿತರಿಸಲಾಯಿತು.

ಕಾಲೇಜಿನ ಇತಿಹಾಸ ಸಹಾಯಕ ಪ್ರಾಧ್ಯಾಪಕ ಪ್ರೊ.ಎಸ್.ರಾಮಕೃಷ್ಣಯ್ಯ ನಿರೂಪಿಸಿ, ದೈಹಿಕ ಶಿಕ್ಷಣ ನಿರ್ದೇಶಕ ಪ್ರೊ.ಆರ್.ವಿ.ಶಶಿಧರ್ ಪ್ರಾರ್ಥಿಸಿ, ಆಂಗ್ಲಭಾಷಾ ವಿಭಾಗದ ಮುಖ್ಯಸ್ಥ ಡಾ.ಮಧುಸೂದನರೆಡ್ಡಿ ಸ್ವಾಗತಿಸಿ, ಭೌತಶಾಸ್ತ್ರ ಸಹಾಯಕ ಪ್ರಾಧ್ಯಾಪಕ ಪ್ರೊ. ಎನ್.ನಾಗರಾಜು ವಂದಿಸಿದರು.

# ಅರಸು ನರ್ಸಿಂಗ್ ಕಾಲೇಜಿನಲ್ಲಿಂದು

ಕೋಲಾರ ಮಾ ೩

ನಗರದ ಹೊರವಲಯದ ದೇವರಾಜ ಅರಸು ನರ್ಸಿಂಗ್ ಕಾಲೇಜಿನ ಪದವಿ ಪ್ರದಾನ ಹಾಗೂ ಜ್ಯೋತಿ ಪ್ರಜ್ವಲಿಸುವಿಕೆ ಕಾರ್ಯಕ್ರಮವು ಇಂದು ಬೆಳಿಗ್ಗೆ ೧೧ ಘಂಟೆಗೆ ರಜತ ಮಹೋತ್ಸವ ಸಭಾಂಗಣದಲ್ಲಿ ನಡೆಯಲಿದೆ.